# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಸಿ.ಎನ್.ಪಾಟೀಲ್, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ(ನಿವೃತ್ತ) ಮತ್ತು ಶ್ರೀ ದೇವೇಂದ್ರಪ್ಪ ಸಿದ್ದರಾಮಪ್ಪ ಪ್ಯಾಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM/4518/2015/ARLO1, ದಿನಾಂಕ: 29.05.2017
2) ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ 13.06.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 19.05.2017 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಚನ್ನವೀರಪ್ಪ ಚನ್ನಬಸಪ್ಪ ಅಂತರಗೊಳಿ, ಇಂಚಂಗಿ ಗ್ರಾಮ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಶ್ರೀ ಈರಪ್ಪ ಶೇಖಪ್ಪ ಇಟಗಿ, ಗಣಕ ಯಂತ್ರ ನಿರ್ವಾಹಕರು, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, 2010 ರಿಂದ 2014 ರವರೆಗಿನ ಅವಧಿಯಲ್ಲಿ ಇಂಚಂಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಶೌಚಾಲಯ ನಿರ್ಮಾಣವಾಗದೇ ಇದ್ದರೂ, ಸುಳ್ಳು ದಾಖಲೆ ಸೃಷ್ಟಿಸಿ ಅನುದಾನ ಬಿಡುಗಡೆ ಮಾಡಲು ಕಾರಣರಾಗಿ ಅವ್ಯವಹಾರ ಮಾಡಿರುತ್ತಾರೆಂದು ಆರೋಪಿಸಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರದಡಿ ತನಿಖೆ ಕೈಗೊಳ್ಳಲಾಗಿದೆ.

ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1)(ii) ಮತ್ತು (iii) ರನ್ವಯ ಎದುರುದಾರರಾದ ಶ್ರೀ ಸಿ.ಎನ್.ಪಾಟೀಲ್, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ(ನಿವೃತ್ತ) ಮತ್ತು ಶ್ರೀ ದೇವೇಂದ್ರಪ್ಪ ಸಿದ್ದರಾಮಪ್ಪ ಪ್ಯಾಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಶಿಸ್ತು ಕ್ರಮಕ್ಕೆ ಭಾದ್ಯರಾಗಿರುತ್ತಾರೆಂದು ಕಂಡು ಬಂದಿದ್ದರಿಂದ, ಸದರಿಯವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14ಎ ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಹಾಗೂ ಶ್ರೀ ಈರಪ್ಪ ಶೇಖಪ್ಪ ಇಟಗಿ, ಗಣಕ ಯಂತ್ರ ನಿರ್ವಾಹಕರು, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ, ಶ್ರೀ ಮುತ್ತಪ್ಪ ವೈ.ತಳವಾರ್, ಅಂದಿನ ಅಧ್ಯಕ್ಷರು, ಶ್ರೀಮತಿ ಫಕೀರವ್ವ ವೈ.ವಾಲೀಕಾರ್, ಅಂದಿನ ಅಧ್ಯಕ್ಷರು ಮತ್ತು ಶ್ರೀವೀರಪ್ಪ ಮಲ್ಲಪ್ಪ ಹಳ್ಳಕಾಯಿ, ಅಂದಿನ ಅಧ್ಯಕ್ಷರು ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರನ್ವಯ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತಾರೆ. ಅದರಂತೆ ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾವೇರಿ ಜಿಲ್ಲಾ ಪಂಚಾಯತಿ ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಸಿ.ಎನ್.ಪಾಟೀಲ್, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ(ನಿವೃತ್ತ) ಮತ್ತು ಶ್ರೀ ದೇವೇಂದ್ರಪ್ಪ ಸಿದ್ದರಾಮಪ್ಪ ಪ್ಯಾಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 503 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 13.06.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಿ.ಎನ್.ಪಾಟೀಲ್, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ(ನಿವೃತ್ತ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವು ಮಂಜೂರಾತಿ ನೀಡಿರುವುದರಿಂದ, ಶ್ರೀ ಸಿ.ಎನ್.ಪಾಟೀಲ್, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ(ನಿವೃತ್ತ) ಮತ್ತು ಶ್ರೀ ದೇವೇಂದ್ರಪ್ಪ ಸಿದ್ದರಾಮಪ್ಪ ಪ್ಯಾಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ಅಥವಾ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14–ಎ ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 314 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5. ಕಾರ್ಯನಿರ್ವಾಹಕ ಅಧಿಕಾರಿ, ಸವಣೂರು ತಾಲ್ಲೂಕು ಪಂಚಾಯತಿ, ಸವಣೂರು, ಹಾವೇರಿ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಸಿ.ಎನ್.ಪಾಟೀಲ್, ಅಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ(ನಿವೃತ್ತ), ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ.
7. ಶ್ರೀ ದೇವೇಂದ್ರಪ್ಪ ಸಿದ್ದರಾಮಪ್ಪ ಪ್ಯಾಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇಂಚಂಗಿ ಗ್ರಾಮ ಪಂಚಾಯತಿ, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ.
8. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.